ಬೋಳಾರೆ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಸ್ಥಾಪನೆ

430 (761) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಉತ್ತರಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಬೋಳಾರೆ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವ ಈಗ ಯಾವ ಹಂತದಲ್ಲಿದೆ;

2. ತಡವಾಗಿರುವುದಕ್ಕೆ ಕಾನೂನು ತೊಡಕೇನಾದರೂ ಇದೆಯೇ;

3. ಯಾವಾಗ ಈ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

1. ಪ್ರಸ್ತಾವನೆ ಬಂದಿರುವುದಿಲ್ಲ.

2. ಅನ್ವಯಿಸುವುದಿಲ್ಲ.

ಸರ್ಕಾರಿ ಆಸ್ಪತ್ರೆಗಳಲ್ಲಿ ನವಜಾತ ಶಿಶುಗಳ ಅದಲು ಬದಲು

432 (763) ಶ್ರೀ ಅಶೋಕ್ ಆರ್. (ಉತ್ತರಹಳ್ಳಿ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ನವಜಾತ ಶಿಶುಗಳ ಅದಲು ಬದಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ನವಜಾತ ಶಿಶುಗಳ ಅದಲು ಬದಲಿಗೆ ಅದರ ಪೋಷಕರು ಸರ್ಕಾರಕ್ಕೆ ದೂರು ಸಲ್ಲಿಸಿರುತ್ತಾರೆಯೇ?

3. ವಾಣಿವಿಲಾಸ ಆಸ್ಪತ್ರೆಯಲ್ಲಿ ಮಹಿಳೆಯೊಬ್ಬರಿಗೆ ಗಂಡು ಮಗುವಿಗೆ ಜನ್ಮ ನೀಡಿದ್ದಾಗಿ ಸಿಬ್ಬಂದಿಯವರು ಮೊದಲು ತಿಳಿಸಿ ಮೂರು ತಾಸುಗಳ ನಂತರ ಹೆಣ್ಣು ಮಗುವನ್ನು ನೀಡಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ?

4. ಇದರ ಮೇಲೆ ಸರ್ಕಾರ ತೆಗೆದುಕೊಂಡಿರುವ ಕಾನೂನು ಕ್ರಮಗಳೇನು?

ಡಾ. ಎ.ಬಿ. ಮಾಲಕ ರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು) :

1. ಬಂದಿರುವುದಿಲ್ಲ

2. ಇಲ್ಲ

3. ಇದೆ. ಹೆಣ್ಣು ಮಗು ಜನಿಸಿದ್ದು, ಗಂಡು ಮಗು ಎಂದು ಸಂಬಂಧಿಕರಿಗೆ ತಿಳಿಸಲಾಗಿದೆ.

4. ಈ ಪ್ರಕರಣದಲ್ಲಿ ತಪ್ಪು ಮಾಹಿತಿ ನೀಡಿದ ವಾಣಿವಿಲಾಸ ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಶ್ರೀಮತಿ ಪುನಿತಾಬಾಯಿ, ಕಿರಿಯ ಮಹಿಳಾ ಆರೋಗ್ಯ ಸಹಾಯಕಿ, ಇವರ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲು ಅಧಿಕ್ಷಕರು, ವಾಣಿವಿಲಾಸ ಆಸ್ಪತ್ರೆ ಇವರಿಗೆ ಸೂಚಿಸಲಾಗಿದೆ. ಹಾಗೂ ಇವರನ್ನು ವಾಣಿವಿಲಾಸ ಆಸ್ಪತ್ರೆಯಿಂದ ವರ್ಗಾವಣೆ ಮಾಡುವಂತೆ ಸಹ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಕೋರಿದೆ.